ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೩

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**ಗುರುವಾರ, ದಿನಾಂಕ: ೦೩ನೇ ಮಾರ್ಚ್, ೨೦೧೬**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೩. ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು

೪. ಗೃಹ ಸಚಿವರು

೫. ನಗರಾಭಿವೃದ್ಧಿ ಸಚಿವರು

೬. ಅಬಕಾರಿ ಮತ್ತು ಮುಜರಾಯಿ ಸಚಿವರು

---

**ಬೆಂಗಳೂರು ಮೆಟ್ರೋ ನಿಗಮದ ನೌಕರರಿಗೆ ಇತರೆ ಭತ್ಯೆ ನೀಡುವ ಬಗ್ಗೆ**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೧ (೩೫೨) ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೇರೆ ಬೇರೆ ಮೆಟ್ರೋ ನಿಗಮಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ನೀಡಲಾಗುತ್ತಿರುವ ಇತರೆ ಭತ್ಯೆಗಳನ್ನು (Perks) ಬೆಂಗಳೂರು ಮೆಟ್ರೋ ನಿಗಮದ ನೌಕರರಿಗೆ ನೀಡದಿರುವುದು ನಿಜವೇ ;

(ಆ) ಚೆನ್ನೈ ಮೆಟ್ರೋ ನಿಗಮದಲ್ಲಿ ನೌಕರರಿಗೆ ನೀಡಲಾಗುತ್ತಿರುವ ಇತರೆ ಭತ್ಯೆಗಳಾವುವು ;

(ಇ) ಬೆಂಗಳೂರು ನಮ್ಮ ಮೆಟ್ರೋ ನಿಗಮದ ನೌಕರರಿಗೆ ಚೆನ್ನೈ ಮೆಟ್ರೋ ನೌಕರರಿಗೆ ನೀಡುತ್ತಿರುವ ರೀತ್ಯಾ ಇತರೆ ಭತ್ಯೆಗಳನ್ನು ಯಾವಾಗಿನಿಂದ ಕೊಡಲಾಗುವುದು:

(ಈ) ಈ ಕುರಿತು ಯಾವ ದಿನಾಂಕದಂದು ಆದೇಶ ಹೊರಡಿಸಲಾಗುವುದು ?

## ನಗರಪಾಲಿಕೆಯ ಸದಸ್ಯರುಗಳಿಗೆ ಗೌರವಧನ ಹೆಚ್ಚಿಸುವ ಬಗ್ಗೆ

**ಶ್ರೀ ಐವನ್ ಡಿ.ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೨ (೨೬೫) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಗರ ಪಾಲಿಕೆಯ ಸದಸ್ಯರುಗಳಿಗೆ ಗೌರವಧನ ಹೆಚ್ಚಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಸದನದಲ್ಲಿ ತಿಳಿಸಿದ್ದು, ಈ ಬಗ್ಗೆ ಈವರೆಗೂ ನಿರ್ಧಾರವನ್ನು ಪ್ರಕಟಿಸದೇ ಇರಲು ಕಾರಣಗಳೇನು ; ಈ ಪ್ರಸ್ತಾವನೆಯನ್ನು ಇಲಾಖೆ ತಿರಸ್ಕರಿಸಿದೆಯೇ ; (ವಿವರ ಒದಗಿಸುವುದು)

(ಆ) ರಾಜ್ಯದ ನಗರಪಾಲಿಕೆ ಸದಸ್ಯರ ತಿಂಗಳೊಂದಕ್ಕೆ ಕನಿಷ್ಟ ರೂ.೧೫,೦೦೦ ಗೌರವ ಧನ ನೀಡಬೇಕೆಂಬ ಬೇಡಿಕೆ ನ್ಯಾಯಯುತವಾಗಿದ್ದು, ಆಯಾ ನಗರ ಪಾಲಿಕೆಯ ಸ್ವಂತ ನಿಧಿಯಿಂದ ಭರಿಸಲು ಇಲಾಖೆಗೆ ಇರುವ ತೊಂದರೆಗಳೇನು:

(ಇ) ನಗರ ಪಾಲಿಕೆಯ ಅಭಿವೃದ್ಧಿಗೆ ಇಲಾಖೆಯಲ್ಲಿರುವ ಕೇಂದ್ರಿಕೃತ ಆಡಳಿತದಿಂದ ಕಾಮಗಾರಿಗಳಿಗೆ ಅನುಮೋದನೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು:

(ಈ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಅನುಮತಿಗೆ ಬಾಕಿ ಇರುವ ಮಂಗಳೂರು ಮಹಾನಗರ ಪಾಲಿಕೆಯ ಅಭಿವೃದ್ಧಿ ಪ್ರಸ್ತಾವನೆಗಳು, ಯೋಜನೆಗಳು ಯಾವುವು ? (ವಿವರ ನೀಡುವುದು)

## ಬಾಪೂಜಿನಗರದಿಂದ ಸ್ಯಾಟಲೈಟ್ ಬಸ್ ನಿಲ್ದಾಣದವರೆವಿಗೂ ಉಕ್ಕಿನ ಸೇತುವೆ ನಿರ್ಮಿಸುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೩ (೩೨೨) ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದ ಮೈಸೂರು ರಸ್ತೆ, ಸ್ಯಾಟಲೈಟ್ ಬಸ್ ನಿಲ್ದಾಣ, ಬಾಪೂಜಿನಗರ, ಶ್ರೀ ಗಾಳಿ ಆಂಜನೇಯ ದೇವಸ್ಥಾನ ಮತ್ತು ಗುಡ್ಡದ ಹಳ್ಳಿ ಟಿಂಬರ್ ಯಾರ್ಡ್ ಲೇಔಟ್ ವ್ಯಾಪ್ತಿಯಲ್ಲಿ ಟ್ರಾಫಿಕ್ ಒತ್ತಡ ಹೆಚ್ಚಾಗಿರುವ ಕಾರಣ ಮಾನ್ಯ ಮುಖ್ಯಮಂತ್ರಿಗಳು ಬಾಪೂಜಿನಗರ ಸೇತುವೆಯಿಂದ ಸ್ಯಾಟಲೈಟ್ ಬಸ್ ನಿಲ್ದಾಣದವರೆವಿಗೂ ಸ್ಟೀಲ್ ಬ್ರಿಡ್ಜ್ ನಿರ್ಮಿಸಲು ಸದರಿ ವಿಚಾರವಾಗಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಪತ್ರ ಸಂಖ್ಯೆ: CM/49419/ MLC/2015 ದಿನಾಂಕ: ೨೪.೦೯.೨೦೧೫ರ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಕಳುಹಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಹಾಗಿದ್ದಲ್ಲಿ, ಬಾಪೂಜಿನಗರ ಸೇತುವೆಯಿಂದ ಸ್ಯಾಟಲೈಟ್ ಬಸ್ ನಿಲ್ದಾಣದವರೆವಿಗೆ ಸ್ಟೀಲ್ ಬ್ರಿಡ್ಜ್ (ಉಕ್ಕಿನ ಸೇತುವೆ) ನಿರ್ಮಿಸಲು ಸರ್ಕಾರ ರೂಪಿಸುತ್ತಿರುವ ರೂಪು-ರೇಷೆಗಳೇನು ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ನಿಲುವೇನು ?

## ಮೃತ ಯೋಧರ ಕುಟುಂಬಕ್ಕೆ ಪರಿಹಾರ ಹಾಗೂ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಳಂಬ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪ (೧೮೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಲ್ಲಿ ದೇಶ ರಕ್ಷಣೆಯಲ್ಲಿ ಮೃತಪಟ್ಟ ರಾಜ್ಯದ ಯೋಧರ ಸಂಖ್ಯೆ ಎಷ್ಟು ; ಸದರಿ ಯೋಧರ ಕುಟುಂಬಕ್ಕೆ ಒದಗಿಸಲಾದ ಪರಿಹಾರ ಮತ್ತು ಇತರೆ ಸೌಲಭ್ಯಗಳಾವುವು ; (ಕುಟುಂಬವಾರು ವಿವರ ನೀಡುವುದು)

(ಆ) ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಯೋಧರ ಕುಟುಂಬಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಯೋಧರ ಕುಟುಂಬಗಳಿಗೆ ಶೀಘ್ರವಾಗಿ ಪರಿಹಾರ ಮತ್ತು ಇನ್ನಿತರ ಸೌಲಭ್ಯಗಳನ್ನು ದೊರಕಿಸಿಕೊಡುವ ಸಂಬಂಧ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಕಾಲ್ಪನಿಕ ವೇತನ ನೀಡುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) +**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೫ (೩೩೬+೩೫೦) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಕುರಿತು ಪರಿಶೀಲಿಸಲು ಶ್ರೀ ಬಸವರಾಜ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ : ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವುದಾದರೂ ಕಾಲಮಿತಿಯನ್ನು ಹಾಕಿಕೊಂಡಿದೆಯೇ ;

(ಆ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿರುವ ಸಿಬ್ಬಂದಿಗಳ ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ದಿನಾಂಕದ ಅವಧಿಯ ಸೇವೆಯನ್ನು ಕಾಲ್ಪನಿಕ ವೇತನ ಬಡ್ತಿಗೆ ಸಂಬಂಧಪಟ್ಟಂತೆ ಪರಿಗಣಿಸುವ ಕುರಿತು ಸರ್ಕಾರದ ನಿಲುವೇನು;

(ಇ) ಸದನದಲ್ಲಿ ಈ ಹಿಂದೆ ಉನ್ನತ ಶಿಕ್ಷಣ ಸಚಿವರು ರೂ.೨೮೫.೦೦ ಕೋಟಿ ಮಿತಿಗೊಳಪಟ್ಟು ಈ ಸಮಸ್ಯೆಯನ್ನು ಬಗೆಹರಿಸುವುದಾಗಿ ಭರವಸೆಯನ್ನು ನೀಡಿದ್ದು ನಿಜವೇ ;

(ಈ) ನಿಜವಾಗಿದ್ದಲ್ಲಿ, ಸರ್ಕಾರ ಈ ಸಮಸ್ಯೆಯ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಂಡಿದೆ ; ಕೈಗೊಂಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಯಾವ ಪರಿಹಾರ ಕ್ರಮ ಕೈಗೊಳ್ಳಲಾಗುವುದು ?

## ಮಹಿಳೆಯರು ಮತ್ತು ಮಕ್ಕಳ ಮೇಲಿನ ಅತ್ಯಾಚಾರ ಪ್ರಕರಣಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೬ (೩೪೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಹಿಳೆಯರು ಮತ್ತು ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ನಡೆದಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅತ್ಯಾಚಾರ ನಡೆದಿರುವ ಪ್ರಕರಣದ ಪೈಕಿ ಮೊಕದ್ದಮೆ ದಾಖಲಾಗಿ ಶಿಕ್ಷೆಗೊಳಪಡಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನ್ಯಾಯಾಲಯದಲ್ಲಿ ಇತ್ಯರ್ಥಪಡಿಸಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಅತ್ಯಾಚಾರ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳು ಶಿಕ್ಷೆಯಿಂದ ಖುಲಾಸೆಗೊಂಡ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

**ನಿವೇಶನ ಹಂಚುವುದಕ್ಕಾಗಿ ಕೋಟ್ಯಾಂತರ ರೂ. ವಂಚನೆ ಪ್ರಕರಣ**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೭ (೨೦೫೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನಲ್ಲಿ ಬಡಾವಣೆ ನಿರ್ಮಿಸಿ, ನಿವೇಶನ ಹಂಚುವುದಾಗಿ ಸಾರ್ವಜನಿಕರು ಹಾಗೂ ಸರ್ಕಾರಿ ನೌಕರರಿಂದ ಕೋಟ್ಯಾಂತರ ರೂ. ಹಣ ವಸೂಲಿ ಮಾಡಿ ವಂಚಿಸಿರುವ ಯಾರು ಯಾರನ್ನು ಬೆಂಗಳೂರಿನ ಬಾಗಲೂರು ಪೊಲೀಸರು ನವೆಂಬರ್–೨೦೧೫ ರಲ್ಲಿ ಬಂಧಿಸಿರುತ್ತಾರೆ ಹಾಗೂ ಇವರುಗಳು ಯಾವ ಯಾವ ಸಂಸ್ಥೆಗಳ ಹೆಸರಿನಲ್ಲಿ ಎಷ್ಟೆಷ್ಟು ಕೋಟಿ ಹಣ ವಸೂಲಿ ಮಾಡಿ ವಂಚನೆ ಎಸಗಿರುತ್ತಾರೆ ;

(ಆ) ಈ ಆರೋಪಗಳ ಮೇಲೆ ಯಾವ ಯಾವ ಠಾಣೆಗಳಲ್ಲಿ, ಯಾವ ಯಾವ ಆರೋಪಗಳಡಿ ಕೇಸ್ ದಾಖಲಾಗಿರುತ್ತದೆ ಹಾಗೂ ನ್ಯಾಯಾಲಯದಿಂದ ಎಷ್ಟು ವಾರೆಂಟ್‌ಗಳು ಇವರ ಮೇಲಿರುತ್ತವೆ ;

(ಇ) ಈ ಪ್ರಕರಣದಲ್ಲಿ ಯಾರು ಯಾರು ಯಾವ ಯಾವ ರೀತಿಯಲ್ಲಿ ಭಾಗಿಯಾಗಿರುತ್ತಾರೆ ;

(ಈ) ಮೇಲ್ಕಂಡ ತನಿಖೆಯಲ್ಲಿ ಸದರಿ ಆರೋಪಿಗಳು ತಮ್ಮ ಹೆಸರಿನಲ್ಲಿ ಯಾವ ಯಾವ ಜಾಗದ, ಯಾವ ಯಾವ ಸರ್ವೆ ನಂಬರ್‌ಗಳಲ್ಲಿ ಎಷ್ಟೆಷ್ಟು ಎಕರೆ ಜಮೀನುಗಳನ್ನು ಖರೀದಿಸಿರುವುದು ಪತ್ತೆಯಾಗಿದೆ ಹಾಗೂ ಸದರಿ ಜಮೀನುಗಳ ಹಾಲಿ ಮಾರುಕಟ್ಟೆ ದರಗಳೆಷ್ಟು ; (ಪೂರ್ಣ ಮಾಹಿಯೊಂದಿಗೆ ಎಫ್.ಐ.ಆರ್. ಪ್ರತಿಯನ್ನು ಒದಗಿಸುವುದು)

(ಉ) ಸದರಿ ಆರೋಪಿಗಳ ಮೇಲೆ ಇಲಾಖೆಯಿಂದ ಯಾವ ಯಾವ ಕಾನೂನುಗಳಡಿ ಪ್ರಕರಣವನ್ನು ದಾಖಲಿಸಲಾಗಿದೆ ಹಾಗೂ ಈವರೆಗಿನ ವಸ್ತುಸ್ಥಿತಿಯ ಪೂರ್ಣ ಮಾಹಿತಿ ಒದಗಿಸುವುದು ;

(ಊ) ಸದರಿಯವರು ಮೇಲ್ಕಂಡ ಹಣದಲ್ಲಿ ತಮ್ಮ ಹಾಗೂ ತಮ್ಮ ಪತ್ನಿಯರ ಹೆಸರಿನಲ್ಲಿ ಖರೀದಿಸಿರುವ ಜಮೀನುಗಳನ್ನು ಮುಟ್ಟುಗೋಲು ಹಾಕಿ ಬಡ್ಡಿ ಸಮೇತ ಮಾನ್ಯ ಸದಸ್ಯರಿಗೆ ಹಣ ಹಿಂತಿರುಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಹಾವೇರಿ ಜಿಲ್ಲೆಯ ಮದ್ಯದ ಅಂಗಡಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೩೮ (೨೬೦) ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಮದ್ಯದಂಗಡಿಗಳಿವೆ : (ಬಾರ್ ಮತ್ತು ರೆಸ್ಟೋರೆಂಟ್, ವೈನ್ ಶಾಪ್ ಮತ್ತು ಎಂ.ಎಸ್.ಐ.ಎಲ್.ನ ಅಂಗಡಿಗಳು ಸೇರಿದಂತೆ ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ : ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು:

(ಇ) ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಶಾಲಾ ಕಾಲೇಜು ಮತ್ತು ದೇವಸ್ಥಾನಗಳ ಹತ್ತಿರ ಮದ್ಯ ಮಾರಾಟ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಗ್ರಾಮಗಳಲ್ಲಿ ಮದ್ಯ ಮಾರಾಟ ಮಾಡುತ್ತಿದ್ದಾರೆ ; ಸದರಿಯವರ ಮೇಲೆ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

## ಸಿನಿಮಾ ಜಾಹೀರಾತುಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೯ (೨೮೫) ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದ ನಾಗರೀಕ ಬಡಾವಣೆಗಳ ಪ್ರತಿ ವಾರ್ಡ್‌ಗಳಲ್ಲಿ, ಸಿನಿಮಾ ಜಾಹಿರಾತುಗಳನ್ನು ಪ್ರದರ್ಶನ ಮಾಡಲು ಫಲಕಗಳ ಅಳವಡಿಕೆಗೆ ಸ್ಥಳಗಳನ್ನು ಗುರುತಿಸಲಾಗುವುದೆಂದು ಬೆಂಗಳೂರು ಮಹಾನಗರ ಪಾಲಿಕೆ ಭರವಸೆ ನೀಡಿದ್ದು, ಸ್ಥಳಗಳನ್ನು ಗುರುತಿಸಲಾಗಿದೆಯೇ ;

(ಆ) ಕನ್ನಡ ಚಲನಚಿತ್ರಗಳು ಪ್ರಚಾರವಿಲ್ಲದೆ, ನಷ್ಟ ಅನುಭವಿಸುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಫಲಕಗಳ ಅಳವಡಿಕೆಗೆ ಸ್ಥಳಗಳನ್ನು ಶೀಘ್ರವಾಗಿ ಗುರುತಿಸಲು ಪ್ರಯತ್ನಿಸುವುದೇ ;

(ಇ) ಗುರುತಿಸಿದ ಸ್ಥಳಗಳು ಮತ್ತು ಫಲಕಗಳ ನಿರ್ವಹಣೆಯ ಜವಾಬ್ದಾರಿಗಳನ್ನು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ವಹಿಸಿ, ವಾರ್ಷಿಕವಾಗಿ ಮಂಡಳಿವತಿಯಿಂದಲೇ ತೆರಿಗೆಯನ್ನು ವಸೂಲು ಮಾಡಲು ಸರ್ಕಾರ ಚಿಂತಿಸುವುದೇ ;

(ಈ) ಮೇಲಿನ ವಿಷಯಗಳ ಬಗ್ಗೆ ಸರ್ಕಾರದ ಚಿಂತನೆಗಳೇನು ?

## ಸಿಬ್ಬಂದಿಗಳ ವೇತನ ದುರುಪಯೋಗಪಡಿಸಿಕೊಂಡ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦ (೨೮೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯ ಅಂಕೋಲಾ ಪೋಲೀಸ್ ಠಾಣೆಯಲ್ಲಿ ೨೦೧೫ನೇ ಸಾಲಿನಲ್ಲಿ ಸಿ.ಪಿ.ಐ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅಧಿಕಾರಿ ಅಲ್ಲಿನ ಕಾನ್‌ಸ್ಟೇಬಲ್‌ಗಳ ದಿನ ಭತ್ಯೆಯನ್ನು ಯಾರಿಗೂ ನೀಡದೇ ಸ್ವಂತಕ್ಕೆ ಉಪಯೋಗಿಸಿ ಸಂಬಂಧಿಸಿದವರ ಹೆಸರಿನಲ್ಲಿ ಬೋಗಸ್ ಸಹಿಯೊಂದಿಗೆ ಸ್ವೀಕೃತ ರಶೀದಿ ತಯಾರಿಸಿ ಎಸ್.ಪಿ. ಕಛೇರಿಗೆ ಕಳುಹಿಸಿದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸ್ವೀಕೃತ ರಶೀದಿ ಹಾಗೂ ಬೋಗಸ್ ಸಹಿ ಮಾಡಿದ ದಾಖಲೆಯ ವಿವರ ಪರಿಶೀಲಿಸಿ ಅವರ ಮೇಲೆ ಕ್ರಮ ಕೈಗೊಳ್ಳದೇ ಬಡ್ತಿ ನೀಡಿರುವುದು ನ್ಯಾಯವೇ ; ಈ ಬಗ್ಗೆ ಸಂಬಂಧಿಸಿದವರ ಮೇಲೆ ಮೇಲಾಧಿಕಾರಿಗಳು ಕ್ರಮ ಕೈಗೊಳ್ಳದೇ ಇರಲು ಕಾರಣವೇನು ; ಈ ಕುರಿತಾದ ದಾಖಲೆ ಸಮೇತ (ದಿನ ಭತ್ಯೆ ರಿಜಿಸ್ಟರಿನಲ್ಲಿಯ) ವರದಿ ನೀಡುವುದು ?

## ರಾಜ್ಯದಲ್ಲಿ ವಾಸಿಸುತ್ತಿರುವ ವಿದೇಶಿ ನಾಗರಿಕರಿಂದ ಸ್ಥಳೀಯರಿಗೆ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) +**

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧ (೧೯೪+೫೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವೀಸಾ ಅವಧಿ ಮುಗಿದ ಬಳಿಕವೂ ಅಕ್ರಮವಾಗಿ ವಾಸಿಸುತ್ತಿರುವ ವಿದೇಶಿ ನಾಗರಿಕರ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಅಂತಹವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ; (ಜಿಲ್ಲಾವಾರು ಪ್ರಕರಣವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಇತ್ತೀಚಿನ ದಿನಗಳಲ್ಲಿ ಬೆಂಗಳೂರು ನಗರದಲ್ಲಿ ವಾಸಿಸುತ್ತಿರುವ ವಿದೇಶಿ ನಾಗರಿಕರು, ವಿದ್ಯಾರ್ಥಿಗಳ ನಡವಳಿಕೆಯು ರಾಜ್ಯದಲ್ಲಿನ ಶಾಂತಿ, ಕಾನೂನು ಸುವ್ಯವಸ್ಥೆಗೆ ಭಂಗ ತರುತ್ತಿರುವ ಮತ್ತು ನಾಗರಿಕರಲ್ಲಿ ಇವರ ನಡವಳಿಕೆಯ ಕುರಿತಾದ ಅಸಹನೆಯನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

(ಇ) ಈ ಪ್ರಕರಣಗಳಲ್ಲಿ ಅಕ್ರಮವಾಗಿ ನೆಲೆಸಿರುವ ಎಷ್ಟು ವಿದೇಶಿಗರಿಗೆ ಶಿಕ್ಷೆಯಾಗಿದೆ: ಮತ್ತು ಅವರನ್ನು ವಾಪಸ್ಸು ಕಳುಹಿಸಲಾಗಿದೆ ; ಈ ನಿಟ್ಟಿನಲ್ಲಿ ಕಂಡು ಬಂದ ಅಂಶಗಳು ಹಾಗೂ ಕೈಗೊಂಡ ಕ್ರಮಗಳ ಕುರಿತಾದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಈ) ಇತ್ತೀಚೆಗೆ ಇವರ ಅಕ್ರಮ ವಾಸ್ತವ್ಯದ ಬಗ್ಗೆ ಹೈಕೋರ್ಟ್ ತೀರ್ಪಿನಲ್ಲಿ ನೀಡಿರುವ ನಿರ್ದೇಶನವೇನು ; ಸದರಿ ತೀರ್ಪಿನ ಅನುಷ್ಠಾನಕ್ಕಾಗಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

**೧೯೯೫ ರವರೆಗೆ ಪ್ರಾರಂಭವಾಗಿರುವ ಪದವಿ ಕಾಲೇಜುಗಳ ಕುರಿತು**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨ (೨೮೦) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೯೫ರಲ್ಲಿ ಪ್ರಾರಂಭವಾಗಿರುವಂತಹ ಪದವಿ ಕಾಲೇಜುಗಳಿಗೆ ಅನುದಾನ ಒದಗಿಸುವುದು ಮತ್ತು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ ; (ವಿವರ ನೀಡುವುದು)

(ಆ) ೧೯೯೫ರಲ್ಲಿ ಆರಂಭಿಸಲಾಗಿರುವಂತಹ ಪದವಿ ಕಾಲೇಜುಗಳಿಗೆ ಅನುದಾನ ಕೊಡುವ ಕುರಿತು ಸರ್ಕಾರದ ಚಿಂತನೆ ಹಾಗೂ ಪ್ರಕ್ರಿಯೆ ಏನು ;

(ಇ) ರಾಜ್ಯದಲ್ಲಿರುವಂತಹ ಅನುದಾನಿತ ಪದವಿ ಕಾಲೇಜುಗಳಲ್ಲಿ ೧೯೯೫ರ ಮೊದಲು ಆರಂಭಿಸುವ ಹೊಸ ವಿಷಯ ಸಂಯೋಜನೆಗಳಿಗೆ ಅನುದಾನ ಕೊಡುವ ಕುರಿತು ಕ್ರಮ ಹಾಗೂ ಚಿಂತನೆ ಏನು ;

(ಈ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ತುಂಬಲು ಸರ್ಕಾರದ ಕ್ರಮ ಹಾಗೂ ಚಿಂತನೆ ಏನು ?

**ಬೆಂಗಳೂರು ನಗರದ ರಸ್ತೆ ಗುಂಡಿ ಮುಚ್ಚುವ ಕಾಮಗಾರಿ ಕುರಿತು**

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೩ (೨೦೧) ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷದಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ ; (ವರ್ಷವಾರು ಮತ್ತು ವಾರ್ಡ್‌ವಾರು ಮಾಹಿತಿ ನೀಡುವುದು)

(ಆ) ಇದಕ್ಕಾಗಿ ವಿನಿಯೋಗಿಸಿರುವ ಅನುದಾನವೆಷ್ಟು ; (ವರ್ಷವಾರು ಮತ್ತು ವಾರ್ಡ್‌ವಾರು ಮಾಹಿತಿ ಒದಗಿಸುವುದು)

(ಇ) ಈಗ ರಸ್ತೆಯಲ್ಲಿದ್ದ ಗುಂಡಿ ಮುಚ್ಚುವ ಕಾಮಗಾರಿಗಳು ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗುಂಡಿ ಮುಚ್ಚಿರುವ ಕಾಮಗಾರಿಯು ಅವೈಜ್ಞಾನಿಕವಾಗಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅವೈಜ್ಞಾನಿಕವಾಗಿ ರಸ್ತೆ ಗುಂಡಿ ಮುಚ್ಚಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಮುಂದಿನ ದಿನಗಳಲ್ಲಿ ಸರ್ಕಾರದಿಂದ ಯಾವ ರೀತಿಯ ಕ್ರಮಗಳನ್ನು ಜರುಗಿಸಲಾಗುವುದು ;

(ಉ) ಈ ರೀತಿ ಅವೈಜ್ಞಾನಿಕವಾಗಿ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ವಿರುದ್ಧ ಯಾವುದಾದರೂ ಕ್ರಮ ಜರುಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು?

## ಬೀದರ್ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೪೪ (೩೩೦) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಹಲವು ವರ್ಷಗಳಿಂದ ಉಂಟಾದ ಬರಗಾಲದಿಂದ ಬೀದರ್ ನಗರದಲ್ಲಿನ ಬಾವಿಗಳು ಬತ್ತಿ ಹೋಗಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಅಥವಾ ತೆಗೆದುಕೊಳ್ಳಲು ಉದ್ದೇಶಿಸಿರುವ ಕ್ರಮಗಳೇನು ;

(ಇ) ೨೪/೭ ಯೋಜನೆಯಡಿ ನಗರ ಪ್ರದೇಶದಲ್ಲಿ ಈಗಾಗಲೇ ನೀರಿನ ಪೈಪ್‌ಲೈನುಗಳನ್ನು ಅಳವಡಿಸಿದ್ದು, ಈ ಯೋಜನೆಯನ್ನು ಯಾವಾಗ ಜಾರಿಗೊಳಿಸಿ ನೀರು ಸರಬರಾಜು ಮಾಡಲು ಸರ್ಕಾರ ಮುಂದಾಗುವುದು? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ಖಾಯಂಗೊಳಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೫ (೧೨) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು : (ಪ್ರಸ್ತುತ ಕಾರ್ಯನಿರ್ವನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ವಿವರ ನೀಡುವುದು)

(ಇ) ಅತಿಥಿ ಉಪನ್ಯಾಸಕರುಗಳು ಸೇವಾ ಭದ್ರತೆಯನ್ನು ಒದಗಿಸುವಂತೆ ರಾಜ್ಯಾದ್ಯಾಂತ ಸತ್ಯಾಗ್ರಹ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರದ ಮುಂದಿನ ಕ್ರಮವೇನು :

(ಈ) ಈಗಾಗಲೇ ಗುತ್ತಿಗೆ ಆಧಾರದ ವೈದ್ಯರನ್ನು ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಹಾಗೂ ಅರೆಕಾಲಿಕ ಪ್ರೌಢ ಶಾಲಾ ಶಿಕ್ಷಕರನ್ನು ಸರ್ಕಾರಿ ಆದೇಶ ಸಂ:ಇಡಿ: ೧೬:ಎಸ್.ಎಲ್.ಬಿ:೧೯೯೬, ದಿನಾಂಕ: ೨೮.೦೨.೨೦೦೬ರ ಪ್ರಕಾರ ಖಾಯಂಗೊಳಿಸಲಾಗಿದೆಯೇ : ಅದೇ ರೀತಿಯಾಗಿ ಅತಿಥಿ ಉಪನ್ಯಾಸಕರುಗಳನ್ನು ಖಾಯಂಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು. ಪಿ7. ಕಾ.ಸೂ. 684. ಪ್ರತಿಗಳು 1500